# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತನಾಲ್ಕನೆಯ ಅಧಿವೇಶನ

## ಪೂರಕ ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:23ನೇ ಸೆಪ್ಟೆಂಬರ್, 2021**

* * *

**ಕ್ರಮ ಸಂಖ್ಯೆ:06ರ ನಂತರ ಈ ಕೆಳಕಂಡ ಬಾಬ್ತನ್ನು ಸೇರಿಸಿಕೊಳ್ಳತಕ್ಕದ್ದು**

**ನಿಯಮ 330ರ ಮೇರೆಗೆ**

೦೪. **ಶ್ರೀ ಪುಟ್ಟಣ್ಣ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಸರ್.ಎಂ. ವಿಶ್ವೇಶ್ವರಯ್ಯ 2ನೇ ಹಂತ ಬಡಾವಣೆ ರಚನೆಗಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಬೆಂಗಳೂರು ಉತ್ತರ ತಾಲ್ಲೂಕಿನ ಯಶವಂತಪುರ ಹೋಬಳಿಯ ಉಲ್ಲಾಳ ಗ್ರಾಮದಲ್ಲಿ ವಶಪಡಿಸಿಕೊಂಡಿರುವ ಜಮೀನುಗಳ ಭೂ ಮಾಲೀಕರಿಗೆ ಪರಿಹಾರ ನೀಡದಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦೯. **ಶ್ರೀ ಎಂ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು,** ಅವರು ಡಾ.ಕೆ.ಶಿವರಾಮ್ ಕಾರಂತ್ ಬಡಾವಣೆ ನಿರ್ಮಾಣಕ್ಕಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸ್ವಾಧೀನಪಡಿಸಿಕೊಳ್ಳಲಾಗಿರುವ 3546 ಎಕರೆ 12 ಗುಂಟೆ ಜಮೀನಿಗೆ ಭೂ ಸ್ವಾಧೀನ ಕಾಯ್ದೆಯಡಿ ರೈತರುಗಳು ಸಲ್ಲಿಸಿರುವ ಆಕ್ಷೇಪಣೆಗಳಿಗೆ ಉತ್ತರವನ್ನು ನೀಡದೆ ಐತೀರ್ಪು ಮಾಡಲು ಉದ್ದೇಶಿಸಿರುವುದರಿಂದ ರೈತರಿಗೆ ಅನ್ಯಾಯವಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

೧೦. **ಶ್ರೀ ಪಿ.ಆರ್. ರಮೇಶ್** ಅವರು 2011ರಲ್ಲಿ 362 ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯ ವಿಳಂಬ ನೀತಿಗೆ ಕಾರಣವಾದ ಸಂವಿಧಾನಿಕ ಬಿಕ್ಕಟ್ಟಿನಿಂದಾಗಿ ಕಳೆದ 10 ವರ್ಷಗಳಿಂದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹುದ್ದೆಗಳು ಖಾಲಿ ಇದ್ದು ಸರ್ಕಾರದ ಆಡಳಿತಕ್ಕೆ ಧಕ್ಕೆ ಉಂಟಾಗಿರುವುದಲ್ಲದೆ ಸಾರ್ವಜನಿಕರಿಗೆ ತೀವ್ರ ಅನಾನುಕೂಲವಾಗಿರುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**